ಅಧ್ಯಕ್ಷರು:– ಮಂಡಿಸಲಾಗಿದೆ.

4. ಕಾರ್ಯದರ್ಶಿಯವರ ವರದಿ

ಶ್ರೀ ಎಸ್. ಬಿ. ಪಾಟೀಲ್:– ಮಾನ್ಯ ಅಧ್ಯಕ್ಷರೇ, ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ಅಥವಾ ರಾಜ್ಯಪಾಲರಿಂದ ಸಂದರ್ಭಾನುಸಾರ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಗಿದೆ.

5. ಸಭೆಯ ಮುಂದಿಡಲಾದ ಕಾಗದ ಪತ್ರಗಳು

I. ಶ್ರೀ ಕೆ.ಎಸ್. ಈಶ್ವರಪ್ಪ (ಜಲಸಂಪನ್ಮೂಲ ಸಚಿವರು) ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರ ಪರವಾಗಿ

1978ರ ಕರ್ನಾಟಕ ನಾಗರೀಕ ಸೇವಾ ಅಧಿನಿಯಮ 8 (3)ರ ಪ್ರಕರಣದ ಮೇರೆಗೆ:

1. 1957ರ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳ ನಿಯಮ 10ಕ್ಕೆ ತಿದ್ದುಪಡಿ ಮಾಡಿ ದಿನಾಂಕ 18.08.2006ರಂದು ಹೊರಡಿಸಲಾದ ಡಿಪಿಎಆರ್ 14 ಎಸ್ಎಸ್ಆರ್ 2006ನೇ ಸಂಖ್ಯೆಯ ಅಧಿಸೂಚನೆ.

2. 1974ರ ಕರ್ನಾಟಕ ನಾಗರೀಕ ಸೇವೆಗಳು (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳ ಅನುಸೂಚಿ 1ಕ್ಕೆ ತಿದ್ದುಪಡಿ ಮಾಡಿ ದಿನಾಂಕ 28.08.2006ರಂದು ಹೊರಡಿಸಲಾದ ಡಿಪಿಎಆರ್ 35 ಎಸ್ಎಸ್ಆರ್ 2004ನೇ ಸಂಖ್ಯೆಯ ಅಧಿಸೂಚನೆ.

3. 2006ರ ಕರ್ನಾಟಕ ಸರ್ಕಾರ ಸಚಿವಾಲಯ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳ ಅನುಸೂಚಿಗೆ ತಿದ್ದುಪಡಿ ಮಾಡಿದ ದಿನಾಂಕ 11.10.2006ರಂದು ಹೊರಡಿಸಲಾದ ಡಿಪಿಎಆರ್ 139 ಎಸ್ಆರ್ಡಿ 2005ನೇ ಸಂಖ್ಯೆಯ ಅಧಿಸೂಚನೆ.

4. 2006ರ ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) (2ನೇ ತಿದ್ದುಪಡಿ) ನಿಯಮಗಳ ನಿಯಮ 7ಕ್ಕೆ ತಿದ್ದುಪಡಿ ಮಾಡಿ ದಿನಾಂಕ